ಗ್ರಾಮಗಳಿಗೆ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಮಂಜೂರು ಮಾಡುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಪ್ರಸಕ್ತ ಸಾಲಿನಲ್ಲಿಯೇ ಮಂಜೂರು ಮಾಡಲಾಗುವುದೇ;

ಇ) ಸದರಿ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಸರ್ಕಾರವು ನಿಗದಿಪಡಿಸಿದ ಸಿಬ್ಬಂದಿಗಳ ಸಂಖ್ಯೆ ಮತ್ತು ನಿಗದಿಪಡಿಸಲಾಗುವ ಅನುದಾನವೆಷ್ಟು?

ಶ್ರೀ ಬಿ. ಶ್ರೀರಾಮುಲು (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು :-

ಅ) 2001 ರ ಜನಗಣತಿ ಪ್ರಕಾರ ಕೊಪ್ಪಳ ತಾಲ್ಲೂಕಿನ ಒಟ್ಟು ಗ್ರಾಮೀಣ ಜನಸಂಖ್ಯೆ 2,49,640 ಇದ್ದು ಮಾರ್ಗಸೂಚಿ ಪ್ರಕಾರ 8 ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಮಂಜೂರು ಮಾಡಲಾಗಿದೆ. ಇನ್ನೂ ಹೆಚ್ಚುವರಿ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಮಂಜೂರು ಮಾಡಲು ಅವಕಾಶವಿರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಅನ್ವಯಿಸುವುದಿಲ್ಲ.

ಸರ್ಕಾರಿ ಆಸ್ಪತ್ರೆಗಳಲ್ಲಿ ಖಾಲಿ ಇರುವ ಡಿ. ದರ್ಜೆ ನೌಕರರ ಹುದ್ದೆಗಳು

529 (1109) ಶ್ರೀ ಖಾದರ್ ಯು.ಟಿ. (ಮಂಗಳೂರು) :- ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:-

ಅ) ರಾಜ್ಯದಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರದಿಂದ ಪ್ರಾರಂಭಗೊಂಡ ಜಿಲ್ಲಾ ಆಸ್ಪತ್ರೆಗಳಲ್ಲಿ ಡಿ. ದರ್ಜೆ ನೌಕರರ ಕೊರತೆಯಿಂದ ರೋಗಿಗಳು ಮತ್ತು ಜನಸಾಮಾನ್ಯರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ಡಿ. ದರ್ಜೆ ನೌಕರರ ಹುದ್ದೆಗಳನ್ನು ತುಂಬಲು ಯಾವ ಕ್ರಮವನ್ನು ಕೈಗೊಳ್ಳಗಾಗಿದೆ.

ಇ) ತಾತ್ಕಾಲಿಕವಾಗಿ ದಿನಗೂಲಿ ಆಧಾರದ ಮೇಲೆ ಡಿ. ದರ್ಜೆ ನೌಕರರನ್ನು ನೇಮಕ ಮಾಡಲಾಗುವುದೇ?

ಶ್ರೀ ಬಿ. ಶ್ರೀರಾಮುಲು (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :-

ಅ) ಜಿಲ್ಲಾ ಆಸ್ಪತ್ರೆ, ಸಮುದಾಯ ಆರೋಗ್ಯ ಕೇಂದ್ರ ಹಾಗೂ ತಾಲ್ಲೂಕು ಆಸ್ಪತ್ರೆಗಳಲ್ಲಿ ಗ್ರೂಪ್-ಡಿ ವೃಂದದ ಸೇವೆಯನ್ನು ಬಾಹ್ಯ ಮೂಲಗಳಿಂದ ಪಡೆದು ಸ್ವಚ್ಛತೆ ಕಾರ್ಯವನ್ನು ನಿರ್ವಹಿಸಿ ಜನಸಾಮಾನ್ಯರಿಗೆ ತೊಂದರೆ ಆಗದಂತೆ ಕ್ರಮ ವಹಿಸಲಾಗಿದೆ.

ಆ) ಗ್ರೂಪ್-ಡಿ ವೃಂದದ ಸಿಬ್ಬಂದಿಯ ನೇರ ನೇಮಕಾತಿಗೆ ನಿರ್ಬಂಧವಿರುವುದರಿಂದ, ಈ ಸೇವೆಗಳನ್ನು ಬಾಹ್ಯ ಮೂಲದಿಂದ ಪಡೆದುಕೊಳ್ಳುವ ಅವಕಾಶವನ್ನು ಕಲ್ಪಿಸಲಾಗಿದೆ.

ಇ) ಇಲ್ಲ.

ಅಕ್ಕಿ ಗಿರಣಿಗಳಿಂದ ಲೆವಿ ಅಕ್ಕಿ ಸಂಗ್ರಹಿಸುತ್ತಿರುವುದು

530 (1110) ಶ್ರೀ ಖಾದರ್ ಯು.ಟಿ. (ಮಂಗಳೂರು) :- ಮಾನ್ಯ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:-

ಅ) ರಾಜ್ಯದಲ್ಲಿರುವ ಅಕ್ಕಿ ಗಿರಣಿ ಮಾಲೀಕರಿಂದ ಎಷ್ಟು ಪ್ರಮಾಣದ ಲೆವಿ ಅಕ್ಕಿ ವಸೂಲಿ ಮಾಡಲು ಸರ್ಕಾರ ಆದೇಶಿಸಿದೆ.

ಆ) ಜಿಲ್ಲಾವಾರು ಇದುವರೆವಿಗೂ ಸಂಗ್ರಹಿಸಿರುವ ಲೆವಿ ಅಕ್ಕಿಯ ಪ್ರಮಾಣ ಎಷ್ಟು?

ಇ) ರಾಜ್ಯದಲ್ಲಿ ಇರುವ ಅಕ್ಕಿ ಗಿರಣಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)?